
ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ


22 ಏಪ್ರಿಲ್ 2026 ಬುಧವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 43 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629




47 ಎಸೆತಗಳಲ್ಲಿ ಶತಕ ಸಿಡಿಸಿ ಕೊಹ್ಲಿ ದಾಖಲೆ ಸರಿಗಟ್ಟಿದ ಸನ್ ರೈಸರ್ಸ್ ಹೈದರಾಬಾದ್ ತಂಡದ ಅಭಿಷೇಕ್ ಶರ್ಮಾ..



ನಮ್ಮ ಶಕ್ತಿ, ನಮ್ಮ ಗ್ರಹ » 2



ಹಿಂದಿ ಭಾಷೆಗೆ ಗ್ರೇಡ್ ಬದಲು ಅಂಕಗಳನ್ನೇ ನೀಡಿ » 3



ಹಡಗು ಕಂಪನಿಗಳಿಗೆ ವಂಚನೆ ಸಂದೇಶ : ಆತಂಕ » 4

# ಪ್ರಧಾನಿ ಮೋದಿ ಭಯೋತ್ಪಾದಕ : ಖರ್ಗೆ

- ಬಿಜೆಪಿ ತೀವ್ರ ವಿರೋಧ, ಬಹಿರಂಗ ಕ್ಷಮೆಯಾಚನೆಗೆ ಆಗ್ರಹ
- ವಿವಾದ ಬಳಿಕ ಯೂಟರ್ನ್

• ಪ್ರಜೋದಯ ವರದಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಒಬ್ಬ ಭಯೋತ್ಪಾದಕ ಎಂದು ಹೇಳಿಕೆ ನೀಡುವ ಮೂಲಕ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಿವಾದವನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ಈ ಹೇಳಿಕೆಗೆ ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಕೂಡಲೇ ಬಹಿರಂಗವಾಗಿ ಕ್ಷಮೆ ಯಾಚಿಸಬೇಕೆಂದು ಒತ್ತಾಯಿಸಿದೆ.

ತಮಿಳುನಾಡಿನಲ್ಲಿ ಚುನಾವಣಾ ಪ್ರಚಾರದ ಕೊನೆಯ ದಿನವಾದ ಮಂಗಳವಾರ ಚೆನ್ನೈನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಖರ್ಗೆ ಅವರು, ಟೆರರಿಸ್ಟ್ ಪ್ರಧಾನಿ ಮೋದಿ ಅವರೊಂದಿಗೆ ಎಐಎಡಿಎಂಕೆ ಕೈಜೋಡಿಸಿರುವುದು ನಿಜಕ್ಕೂ ವಿಷಾದನೀಯ. ಸಮಾನತೆ ಮತ್ತು ನ್ಯಾಯದ ಮೇಲೆ ನಂಬಿಕೆ ಇರದ ಪಕ್ಷದೊಂದಿಗೆ ಎಐಎಡಿಎಂಕೆ ನಂಬಿಕೆ ಇಟ್ಟಿರುವುದು ಆಶ್ಚರ್ಯವೆಂದು ಹೇಳಿದರು.

ನಮಗೆ ಹೆಚ್ಚು ಸಂಸದರನ್ನು ನೀಡಿದ ತಮಿಳುನಾಡು ಜನರಿಗೆ ನಾನು ಧನ್ಯವಾದ ಹೇಳುತ್ತೇನೆ. ಅದಕ್ಕಾಗಿಯೇ ನಾವು ಮಸೂದೆಯನ್ನು ಹೋರಾಡಿ ಸೋಲಿಸಲು ಸಾಧ್ಯವಾಯಿತು. ಇದು ಪೆರಿಯಾರ್, ಡಾ. ಅಂಬೇಡ್ಕರ್, ಅಣ್ಣಾದೊರೈ, ಮಹಾನ್ ಕಾಮರಾಜ್ ಮತ್ತು ಕರುಣಾನಿಧಿ ಅವರ ವೈಜ್ಞಾನಿಕ ಚಿಂತನೆ ಮತ್ತು ಆದರ್ಶಗಳ ನಾಡು ಎಂದರು.

**ವಿರೋಧದ ಬಳಿಕ ಸ್ಪಷ್ಟನೆ**

ಹೇಳಿಕೆ ವಿವಾದ ಸ್ವರೂಪ ಪಡೆಯುತ್ತಿದ್ದಂತೆ ಸ್ಪಷ್ಟನೆ ನೀಡಿದ ಮಲ್ಲಿಕಾರ್ಜುನ ಖರ್ಗೆ, ಪ್ರಧಾನಿ ಒಬ್ಬ ಭಯೋತ್ಪಾದಕ ಎಂದು ನಾನು ಎಂದಿಗೂ ಹೇಳಿಲ್ಲ. ಅವರು ಜನರನ್ನು ಮತ್ತು ರಾಜಕೀಯ ಪಕ್ಷಗಳನ್ನು ಬೆದರಿಸುವ ಕೆಲಸ ಮಾಡುತ್ತಾರೆಂದು ಹೇಳಲು ಬಯಸಿದ್ದೆ. ಪ್ರಧಾನಿ ಮೋದಿ ಯಾವಾಗಲೂ ಬೆದರಿಕೆ ಹಾಕುತ್ತಾರೆ ಮತ್ತು ಅವರ ನಡವಳಿಕೆ ರಾಜಕೀಯ ವಲಯದಲ್ಲಿ ಭಯ ಉಂಟುಮಾಡುತ್ತದೆ ಎಂದು ಸ್ಪಷ್ಟಪಡಿಸಿದರು.



ಪ್ರಧಾನಿ ತಮ್ಮ ರಾಜಕೀಯ ವಿರೋಧಿಗಳನ್ನು, ಇಡಿ, ಸಿಬಿಐ, ಐಟಿ ಬಳಸುವ ಮೂಲಕ ಭಯಭೀತಗೊಳಿಸುತ್ತಿದ್ದಾರೆ ಎಂದು ಹೇಳುವುದು ನನ್ನ ಉದ್ದೇಶವಾಗಿತ್ತು. ಮೋದಿ ಯಾವಾಗಲೂ ಬೆದರಿಕೆ ಹಾಕುತ್ತಾರೆ. ಇಡಿ, ಐಟಿ ಮತ್ತು ಸಿಬಿಐ ನಂತಹ ಸಂಸ್ಥೆಗಳು ಅವರ ಕೈಯಲ್ಲಿವೆ. ಅವರು ಕ್ಷೇತ್ರ ಪುನರ್ ವಿಂಗಡಣೆಯನ್ನು ತಮ್ಮ ಕೈಗೆ ತೆಗೆದುಕೊಳ್ಳಲು ಬಯಸುತ್ತಿದ್ದಾರೆಂದು ಹೇಳಿದರು.

» ನಾಲ್ಕನೇ ಪುಟದಲ್ಲಿ

## ಪ್ರಧಾನಿ ವಿರುದ್ಧ ಹಕ್ಕುಚ್ಯುತಿಗೆ ನೋಟೀಸ್

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರವನ್ನು ಉದ್ದೇಶಿಸಿ ಮಾಡಿದ ಭಾಷಣದಲ್ಲಿ ವಿರೋಧ ಪಕ್ಷಗಳ ಸಂಸದರನ್ನು ದೂಷಿಸಿದ್ದಕ್ಕಾಗಿ ಅವರ ವಿರುದ್ಧ ಹಕ್ಕುಚ್ಯುತಿ ಮಂಡಿಸಲು ಅವಕಾಶ ಕೋರಿ ಕಾಂಗ್ರೆಸ್ ಸಂಸದ ಕೆ.ಸಿ.ವೇಣುಗೋಪಾಲ್ ಅವರು ಮಂಗಳವಾರ ನೋಟೀಸ್ ಸಲ್ಲಿಸಿದ್ದಾರೆ.

ಕ್ಷೇತ್ರ ಮರು ವಿಂಗಡಣೆ ಮಸೂದೆಗೆ ಅಂಗೀಕಾರ ಪಡೆಯುವಲ್ಲಿ ವಿಫಲವಾಗಿದ್ದಕ್ಕೆ ಪ್ರಧಾನಿಯವರು ಕೋಪಗೊಂಡು ವಿರೋಧ ಪಕ್ಷಗಳ ಸಂಸದರ ಮೇಲೆ ವಾಗ್ದಾಳಿ ನಡೆಸಿ ಅವರ ಮತದಾನವನ್ನು ಪ್ರಶ್ನಿಸಿರುವುದು ಸದನದ ಘನತೆಗೆ ತಕ್ಕದಲ್ಲ. ವಿಧಾನಸಭಾ ಚುನಾವಣಾ ಪೂರ್ವದಲ್ಲಿ ರಾಷ್ಟ್ರವನ್ನು ಉದ್ದೇಶಿಸಿ ಮಾಡಿದ ಭಾಷಣದಲ್ಲಿ, ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆಂದು ಆರೋಪಿಸಿದ್ದಾರೆ.

ವೇಣುಗೋಪಾಲ್ ಅವರು ಸ್ಪೀಕರ್ ಓಂ ಬಿರ್ಲಾ ಅವರಿಗೆ ಬರೆದಿರುವ ಪತ್ರದಲ್ಲಿ, ಮೋದಿ ಅವರು ತಮ್ಮ ಸರ್ಕಾರದ ವೈಫಲ್ಯಕ್ಕಾಗಿ ವಿರೋಧ ಪಕ್ಷವನ್ನು ಟೀಕಿಸಿದ್ದಾರೆ. ಮಸೂದೆ ಕುರಿತಂತೆ ವಿರೋಧ ಪಕ್ಷಗಳ ನಿಲುವನ್ನು ವಿವರಿಸಲು ಭ್ರೂಣಹತ್ಯೆ ಪಾಪ ಎಂಬ ಪದಗಳನ್ನು ಬಳಸಿದ್ದಾರೆ. ಇದು ಅನೈತಿಕ ಮತ್ತು ಅಧಿಕಾರದ ಸ್ಪಷ್ಟ ದುರುಪಯೋಗ, ಸದನದ ನಿಂದನೆ ಆಗಿದೆ ಎಂದು ದೂರಿದ್ದಾರೆ. ಸಂಸದರ ವಿರುದ್ಧ ಪ್ರಧಾನಿ ನಡೆಸಿದ ವಾಗ್ದಾಳಿಯು ಸಂಸತ್ತು ಮತ್ತು ಜನರ ಪ್ರಜಾತಾಂತ್ರಿಕ ಹಕ್ಕುಗಳ ಮೇಲಿನ ದಾಳಿಯಾಗಿದೆ ಎಂದು ಹೇಳಿದ್ದಾರೆ.

# ಪುರಸಭೆ ಮಳಿಗೆ ಬಾಕಿ ಉಳಿಸಿಕೊಂಡಿದ್ದಕ್ಕೆ ತರಾಟೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪುರಸಭಾ ವಾಣಿಜ್ಯ ಮಳಿಗೆಗಳ ಬಾಡಿಗೆ ವಸೂಲಿ ಮಾಡದೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿ ಬಾಕಿ ಉಳಿಸಿಕೊಂಡು ಸರ್ಕಾರಕ್ಕೆ ನಷ್ಟವುಂಟು ಮಾಡಿದ್ದಾರೆಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಮಂಗಳವಾರ ನಡೆದ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲೇ ಎಲ್ಲೂ ಇಲ್ಲದಷ್ಟು ಆದಾಯದ ಮೂಲಗಳಾಗಿ ವಾಣಿಜ್ಯ ಸಂಕೀರ್ಣಗಳನ್ನು ಪಟ್ಟಣದಲ್ಲಿ ಮಾಡಿದ್ದೇನೆ. 20 ರಿಂದ 50 ಲಕ್ಷ ರೂ. ವರೆಗೂ ಹರಾಜಿನಲ್ಲಿ ಮಳಿಗೆ ಪಡೆಯುವ ವರ್ತಕರು ಬಾಡಿಗೆ ಬಾಕಿ ಉಳಿಸಿಕೊಳ್ಳಲು ಕಾರಣವೇನು. ಅಂತಹವರಿಗೆ ಬಿಲ್ ಕಲೆಕ್ಟರ್‌ಗಳು ಮಣೆ ಹಾಕುತ್ತಿದ್ದಾರೆಂಬ ಆರೋಪವಿದೆ. ನಾನು ಇಂತಹದಕ್ಕೆಲ್ಲಾ ಆಸ್ಪದ ಕೊಡುವುದಿಲ್ಲವೆಂದು ಎಚ್ಚರಿಕೆ ನೀಡಿದರು.

10 ರಿಂದ 12 ಲಕ್ಷ ರೂ.ವರೆಗೆ ಬಾಕಿ ಉಳಿಸಿಕೊಂಡಿರುವ ಪಟ್ಟಿ ಪರಿಶೀಲಿಸಿದ ಅವರು, ವಸೂಲಾತಿ ಜವಾಬ್ದಾರಿ ವಹಿಸಿಕೊಂಡಿರುವ ಮೋಹನ್ ಕುಮಾರ್ ವಿರುದ್ಧ ತೀವ್ರ ಸಿಡಿಮಿಡಿಗೊಂಡರು. ಮುಂದಿನ ಒಂದು ತಿಂಗಳೊಳಗಾಗಿ ಬಾಕಿ ವಸೂಲಿ ಮಾಡಬೇಕೆಂದು ಸೂಚಿಸಿದರು.



ಬೇಸಿಗೆಯ ಬೇಗೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ಪೂರೈಕೆ ಸಮರ್ಪಕತೆಗೆ ಗಮನ ಹರಿಸಬೇಕು. ಪಟ್ಟಣದ ಬಸ್ ನಿಲ್ದಾಣದ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವಿಲ್ಲ. ಪ್ರಯಾಣಿಕರು, ಗ್ರಾಮೀಣ ಜನರು ಪರಿತಪಿಸುವಂತಾಗಿದೆ. ಸೂಕ್ತ ಸ್ಥಳ ದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಶಿವಶಂಕರ್ ಗೆ ಹೇಳಿದರು.

ಪ್ರತಿ ವಾರ್ಡ್‌ಗಳಲ್ಲಿ ವಸತಿ ಹೀನರನ್ನು ಗುರುತಿಸಿ ಪಟ್ಟಿ ಮಾಡುವಂತೆ ಕಳೆದ 6 ತಿಂಗಳಿನಿಂದ ಹೇಳುತ್ತಿದ್ದೇನೆ. ಈಗಾಗಲೇ 1.5 ಸಾವಿರ ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು ಕೊಳಚೆ ನಿರ್ಮೂಲನಾ ಮಂಡಳಿಯಿಂದ ಸಹಾಯ ಧನ ನೀಡಲಾಗಿದೆ. ಇನ್ನಷ್ಟು ಪ್ರಯೋಜನಕಾರಿಯಾಗಿ ವಸತಿ ಅನುಕೂಲತೆಗೆ ಪಟ್ಟಿ ಮಾಡಲು ಸೂಚಿಸಿದ್ದರೂ ಕಾರ್ಯ ರೂಪಿಸದ ನೌಕರ ರಮೇಶ್ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಮುಂದಿನ 20 ದಿನಗಳೊಳಗೆ ವಸತಿ ರಹಿತರನ್ನು ಗುರುತಿಸಿ ಪ್ರತಿ ವಾರ್ಡ್‌ನ ಮನೆ ಭೇಟಿ ಮಾಡಿಸುವುದಾಗಿ ಮುಖ್ಯಾಧಿಕಾರಿ ತಿಳಿಸಿದರು.

ಪಟ್ಟಣದಲ್ಲಿ ಯುಜಿಡಿ ಸಂಪರ್ಕ ಸಂಪೂರ್ಣ ವಿಫಲವಾಗಿದೆ. ಈ ಬಗ್ಗೆ ಕಳೆದ 2 ವರ್ಷಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈಗ 1.26 ಕೋ.ರೂ. ಬಿಡುಗಡೆಗೆ ಕೋರಿದ್ದೇನೆ. ನಿರೀಕ್ಷೆ ಕೈಗೂಡಿದರೆ, ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ಹೊಸದಾಗಿ ಯುಜಿಡಿ ಕೊಳಚೆ ನೀರು ಸಂಸ್ಕರಣ ಹೊಂಡಗಳನ್ನು ನಿರ್ಮಿಸಿ ಎಲ್ಲವೂ ಹೊಸತಾಗಿ ನಿರ್ಮಿಸಲು ಯೋಜಿಸಲಾಗಿದೆ. ಗಾಂಧಿ ವೃತ್ತ ಸೇರಿ ಅರಕಲಗೂಡು ಮಾರ್ಗದವರೆಗೆ ರಸ್ತೆ ದುರಸ್ತಿಗೆ ಟೆಂಡರ್ ಕರೆಯಲಾಗಿದೆ. ಸದ್ಯದಲ್ಲೇ ಕಾಮಗಾರಿ ಕೈಗೆತ್ತಿಕೊಳ್ಳಲು ಸೂಚಿಸಿದ ಅವರು, ಪಟ್ಟಣದಲ್ಲಿ ಮಾಂಸ ಮಾರಾಟ ಮಳಿಗೆ ಹೆಚ್ಚಳಗೊಳಿಸಬೇಕಿದೆ. ಮೀನು ಮತ್ತು ಮಾಂಸ ಮಾರಾಟ ಮಳಿಗೆಗಳ ಬಾಡಿಗೆ ಬಾಕಿ ಉಳಿಸಿಕೊಂಡವರ ವಿರುದ್ಧ ಕ್ರಮಕೈಗೊಳ್ಳಿ ಎಂದರು.

# ಕ್ಷೇತ್ರ ಪುನರ್ ವಿಂಗಡಣೆಗಷ್ಟೇ ಕಾಂಗ್ರೆಸ್ ವಿರೋಧ

## ಮಹಿಳಾ ಮೀಸಲಾತಿ ಜಾರಿಗೆ ಈಗಲೂ ಬದ್ಧ : ಶ್ರೇಯಸ್ ಪಟೇಲ್

• ಪ್ರಜೋದಯ ವರದಿ

ಹಾಸನ: ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧ ಮಾಡಿಲ್ಲ, ನಮ್ಮ ವಿರೋಧ ಇರುವುದು ಕ್ಷೇತ್ರ ಪುನರ್ ವಿಂಗಡಣೆಗೆ ಮಾತ್ರವೆಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ಮಂಗಳವಾರ ಸಂಸದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶೇಷ ಅಧಿವೇಶದಲ್ಲಿ ಕೇವಲ ಮಹಿಳಾ ಮೀಸಲಾತಿ ವಿಧೇಯಕ ತಂದಿದ್ದರೆ ಸರ್ವಪಕ್ಷಗಳೂ ಸಹಮತ ಸೂಚಿಸುತ್ತಿದ್ದವು. ಆದರೆ, ಏಕಾಏಕಿ ಕ್ಷೇತ್ರ ಪುನರ್ ವಿಂಗಡಣೆ ಮಸೂದೆ ಜಾರಿಗೆ ಮುಂದಾಗಿದ್ದರಿಂದ ನಾವೆಲ್ಲಾ ವಿರೋಧ ವ್ಯಕ್ತಪಡಿಸಿದ್ದೇವೆ. ರಾಜೀವ್ ಗಾಂಧಿ, ಇಂದಿರಾ ಗಾಂಧಿ ಅವರು ಕೂಡ ಮಹಿಳಾ ಮೀಸಲಾತಿ ಕಾಯ್ದೆಗೆ ಜಾರಿಗೊಳಿಸಲು ಪ್ರಯತ್ನಿಸಿದ್ದಾರೆ. ಹೀಗಿರುವಾಗ ನಾವು ವಿರೋಧಿಸುವ ಪ್ರಶ್ನೆಯೇ ಇಲ್ಲವೆಂದು ಸ್ಪಷ್ಟಪಡಿಸಿದರು.



> ಕೇಂದ್ರ ಸರ್ಕಾರ ತಮ್ಮ ತಪ್ಪುಗಳನ್ನು ಮರೆ ಮಾಚಿಕೊಂಡು ಚುನಾವಣೆ ಗೆಲ್ಲುವ ಸಲುವಾಗಿ ಮಹಿಳಾ ಮೀಸಲಾತಿ ಮಸೂದೆ ಮುಂಡಿಸಿದೆ. ಈ ವಿಚಾರ ಈಗಾಗಲೇ ಜನರಿಗೆ ಅರಿವಾಗಿದೆ. ಈ ತಂತ್ರಗಾರಿಕೆ ಬಿಟ್ಟು ಪ್ರತ್ಯೇಕವಾಗಿ ಮಹಿಳಾ ಮೀಸಲಾತಿ ಮಸೂದೆ ಮಂಡಿಸಿದರೆ ನಾವೆಲ್ಲಾ ಸರ್ವಾನುಮತದಿಂದ ಅನುಮೋದನೆ ನೀಡುತ್ತೇವೆ.
>
> - ಶ್ರೇಯಸ್ ಪಟೇಲ್, ಸಂಸದ

ಮಹಿಳಾ ಮೀಸಲಾತಿ ಜಾರಿಗಾಗಿ ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ನಾವೆಲ್ಲಾ ಭಾವಿಸಿದ್ದೇವು. ಆದರೆ, ಅದರೊಳಗೆ ಕ್ಷೇತ್ರ ಪುನರ್ ವಿಂಗಡಣೆ ಮಸೂದೆ ಸೇರಿಸಿದ್ದರಿಂದ ಈ ಬಗ್ಗೆ ಸಮಗ್ರ ಅಧ್ಯಯನ ಮತ್ತು ಹೆಚ್ಚಿನ ಚರ್ಚೆ ಆಗಬೇಕಿದೆ. ಅಲ್ಲದೇ 2011ರ ಜನಗಣತಿ ಆಧಾರದ ಮೇಲೆ ಕ್ಷೇತ್ರ ವಿಂಗಡಣೆ ಅವೈಜ್ಞಾನಿಕವಾಗಿದ್ದರಿಂದ ವಿರೋಧ ವ್ಯಕ್ತಪಡಿಸಿದ್ದೇವೆ. ಕೇಂದ್ರ ಸರ್ಕಾರ ರಾಜ್ಯ ಸರ್ಕಾರದ ಪ್ರತಿನಿಧಿಗಳ ಸಭೆ ನಡೆಸಿಲ್ಲ, ಸರ್ವಪಕ್ಷದ ಸಭೆಯನ್ನೂ ಕರೆದಿಲ್ಲ,

» ನಾಲ್ಕನೇ ಪುಟದಲ್ಲಿ

# ಮಹಿಳಾ ಮೀಸಲಾತಿಗೆ ವಿರೋಧ : ಕಾಂಗ್ರೆಸ್ ನಿಜ ಬಣ್ಣ ಬಯಲು

• ಪ್ರಜೋದಯ ವರದಿ

**ಹಾಸನ:** ಮಹಿಳಾ ಸಬಲೀಕರಣ ಬಯಸದ ಕಾಂಗ್ರೆಸ್ ಹಾಗು ಮಿತ್ರ ಪಕ್ಷಗಳು ಮಹಿಳಾ ಮೀಸಲಾತಿ ಮಸೂದೆ ವಿರೋಧಿಸಿ ತಮ್ಮ ನಿಜ ಬಣ್ಣ ಬಯಲು ಮಾಡಿವೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಜೆ. ಗೌಡ ಅವರು ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಮಹಿಳಾ ಮೀಸಲಾತಿ, ಕ್ಷೇತ್ರ ಪುನರ್ ವಿಂಗಡಣೆ ಕುರಿತು ಪ್ರತಿಪಕ್ಷಗಳ ಸಂಸದರೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಬಳಿಕವೇ ಮಸೂದೆ ಅಂಗೀಕಾರಕ್ಕೆ ನಿರ್ಧರಿಸಲಾಗಿತ್ತು. ಆದರೆ, ಕಾಂಗ್ರೆಸ್‌ಗೆ ರಾಷ್ಟ್ರ ಹಿತಕ್ಕಿಂತ ರಾಜಕೀಯ ಹಿತಾಸಕ್ತಿಯೇ ಮುಖ್ಯವಾಗಿತ್ತು. ರಾಜಕೀಯ ಮೇಲಾಟದಲ್ಲಿ ನಮಗೆ ಸೋಲಾಗಿರಬಹುದು. ದೇಶದ ತಾಯಂದಿರು, ಸಹೋದರಿಯರು ಕಾಂಗ್ರೆಸ್‌ನ್ನು ಯಾವತ್ತಿಗೂ ಕ್ಷಮಿಸುವುದಿಲ್ಲವೆಂದರು.

ಈ ಮಹತ್ವದ ಮಸೂದೆ ಬಿಜೆಪಿಯ ದಿಢೀರ್ ಪ್ರೀತಿ ಅಲ್ಲ. ಅಯೋಧ್ಯೆಯಲ್ಲಿ ರಾಮ ಮಂದಿರ, ಸಿಎಎ, ಆರ್ಟಿಕಲ್ 370 ರದ್ದು, ತ್ರಿವಳಿ ತಲಾಖ್ ರದ್ದು ಹೀಗೆ ತನ್ನ ನಿಯೋಜಿತ ಉದ್ದೇಶಗಳಂತೆ ಮಹಿಳಾ ಮೀಸಲಾತಿ ಅನುಷ್ಠಾನವೂ ಬಿಜೆಪಿಯ ಭರವಸೆಯಾಗಿದೆ. ರಾಷ್ಟ್ರದ 70 ಕೋಟಿ ಮಹಿಳೆಯರಿಗೆ ಅನುಕೂಲವಾಗಲಿ

» ನಾಲ್ಕನೇ ಪುಟದಲ್ಲಿ

## ರಾಜಕೀಯ ಮೇಲಾಟದಲ್ಲಿ ನಮಗೆ ಸೋಲು | ಪ್ರೀತಮ್ ಜೆ. ಗೌಡ ಹೇಳಿಕೆ





### ಅನುಮಾನ ಬೇಡ ನಾನೇ ಸ್ಪರ್ಧಿಸುವೆ

2028ರ ವಿಧಾನಸಭೆ ಚುನಾವಣೆಯಲ್ಲಿ ಹಾಸನ ಕ್ಷೇತ್ರದಿಂದ ನಾನೇ ಸ್ಪರ್ಧಿಸುತ್ತೇನೆ, ಅದರಲ್ಲಿ ಯಾವುದೇ ಅನುಮಾನ ಬೇಡವೆಂದು ಪ್ರೀತಮ್ ಜೆ. ಗೌಡ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ನಾನು 100 ಮೀಟರ್ ಓಟಗಾರನಲ್ಲ, ಮ್ಯಾರಾಥಾನ್ ಓಡಲು ಬಂದಿದ್ದು ನಿಧಾನಕ್ಕೆ ಗುರಿ ತಲುಪುತ್ತೇನೆ. ಈ ವಿಚಾರದಲ್ಲಿ ಯಾರಿಗೂ ಅನುಮಾನ ಬೇಡವೆಂದರು.

ಬಿಜೆಪಿ-ಜೆಡಿಎಸ್ ಮೈತ್ರಿ ಕುರಿತು ನಿಖಿಲ್ ಕುಮಾರಸ್ವಾಮಿ ಅವರ ಸೈದ್ಧಾಂತಿಕ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಅವರ ಸಿದ್ಧಾಂತ ಅವರದು, ನಮ್ಮ ಸಿದ್ಧಾಂತ ನಮ್ಮದು. ನಮ್ಮ ಸಿದ್ಧಾಂತ ಒಪ್ಪಿದ ಮತದಾರರು ನಮ್ಮ ಜೊತೆಗಿದ್ದಾರೆ. ಹೆಚ್.ಡಿ.ಕುಮಾರಸ್ವಾಮಿ ಅವರು ಎನ್‌ಡಿಎ ನಾಯಕರಾಗಿದ್ದಾರೆ. ನಿಖಿಲ್ ಅವರ ಹೇಳಿಕೆಯನ್ನು ಅವರು ಒಪ್ಪುತ್ತಾರೆಯೇ ಕೇಳಿ ನೋಡಿ. ಮುಂದಿನ ಬಾರಿ ಎನ್‌ಡಿಎ ಅಭ್ಯರ್ಥಿಯೇ ಮುಖ್ಯಮಂತ್ರಿಯಾಗುವುದು ಖಚಿತ. ಮಹಾರಾಷ್ಟ್ರದಲ್ಲಿ ದೇವೇಂದ್ರ ಪಡ್ನವಿಸ್, ಬಿಹಾರದಲ್ಲಿ ಸಾಮ್ರಾಟ್ ಚೌದರಿಯಾದ ರೀತಿಯಲ್ಲಿ ಕರ್ನಾಟಕದಲ್ಲೂ ಯಾರಾದರೂ ಒಬ್ಬರು ಮುಖ್ಯಮಂತ್ರಿಯಾಗುತ್ತಾರೆ. ನಿಖಿಲ್ ಅವರು ಯುವಕರಿದ್ದು ತಮ್ಮ ಪಕ್ಷದ ಸಿದ್ಧಾಂತದ ಕುರಿತು ಮಾತನಾಡಿದ್ದಾರೆ. ಅವರಿಗೆ ಒಳ್ಳೆಯದಾಗಲಿ ಎಂದರು.

ರಾಷ್ಟ್ರೀಯ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನನ್ನ ಮನಸ್ಸಿನ ಇಚ್ಛೆಯನ್ನು ಸಾರ್ವಜನಿಕವಾಗಿ ಹೇಳಿಕೊಂಡರೆ ಆ ಸ್ಥಾನಕ್ಕೆ ಗೌರವ ಇರುವುದಿಲ್ಲ. ರಾಜಕಾರಣದ ಜೊತೆಗೆ ಸ್ಥಾನದ ಗೌರವ ಉಳಿಸಿಕೊಳ್ಳುವ ಅನಿವಾರ್ಯತೆ ಇದೆ ಎಂದರು.

> ಮಹಿಳಾ ಮೀಸಲಾತಿಗೆ ವಿರೋಧ ಇಲ್ಲ ಎನ್ನುವ ಕಾಂಗ್ರೆಸ್ಸಿನವರು ಇಷ್ಟು ವರ್ಷಗಳ ಕಾಲ ಆಡಳಿತದಲ್ಲಿದ್ದಾಗ ಏಕೆ ಜಾರಿಗೊಳಿಸಲಿಲ್ಲ. ರಾಹುಲ್ ಗಾಂಧಿ ಅವರ ತಂದೆ, ತಾತ, ಮುತ್ತಾತ, ಅಜ್ಜಿ ಕೈಯಲ್ಲಿ ಅಧಿಕಾರ ಇದ್ದರೂ ಮಹಿಳಾ ಮೀಸಲಾತಿ ಕುರಿತು ಯೋಚಿಸಲಿಲ್ಲ. ರಾಜಕೀಯ ಅಸ್ತಿತ್ವ ಅಲುಗಾಡುತ್ತದೆಂದು ಮಸೂದೆಗೆ ವಿರೋಧಿಸುತ್ತಿದ್ದಾರೆ.
>
> -ಪ್ರೀತಮ್ ಜೆ. ಗೌಡ, ಮಾಜಿ ಶಾಸಕ

# ಗುತ್ತಿಗೆ ಕಾರ್ಮಿಕರ ಹೋರಾಟ ಬೆಂಬಲಿಸಿ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಗುತ್ತಿಗೆ ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿ ಹಾಗು ದೆಹಲಿ ಸುತ್ತಮುತ್ತಲಿನ ರಾಜ್ಯಗಳಲ್ಲಿ ನಡೆಯುತ್ತಿರುವ ಕಾರ್ಮಿಕರ ಹೋರಾಟ ಬೆಂಬಲಿಸಿ ಸಿಐಟಿಯು ವತಿಯಿಂದ ನಗರದ ಮಹಾವೀರ ವೃತ್ತದಲ್ಲಿ ಮಂಗಳವಾರ ಪ್ರತಿಭಟನೆ ನಡೆಯಿತು.

ಉತ್ತರ ಪ್ರದೇಶ ಮತ್ತು ಹರಿಯಾಣದ ಬಿಜೆಪಿ ನೇತೃತ್ವದ ಸರ್ಕಾರ ನೋಯ್ಡಾ, ಗ್ರೇಟರ್ ನೋಯ್ಡಾ, ಗುರುಗ್ರಾಮ್ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ಕಾರ್ಮಿಕರ ಹೋರಾಟಗಳ ಮೇಲೆ ನಡೆಸುತ್ತಿರುವ ದಮನ ಖಂಡನೀಯ. ಸರ್ಕಾರ ಕಾರ್ಪೊರೇಟ್ ಹಿತಾಸಕ್ತಿಗಳನ್ನು ರಕ್ಷಿಸಲು ಕಾರ್ಮಿಕರ ಹಕ್ಕುಗಳನ್ನು ಕುಗ್ಗಿಸುತ್ತಿದೆ ಎಂದು ಆರೋಪಿಸಿದರು.



ದೆಹಲಿಯ ಶಕ್ತಿ ಕೇಂದ್ರದಲ್ಲಿ ಗುತ್ತಿಗೆ ಕಾರ್ಮಿಕರ ಶೋಷಣೆ ನಡೆಯುತ್ತಿದೆ. ತಿಂಗಳಿಗೆ 10 ರಿಂದ 12 ಸಾವಿರ ವೇತನ, 10-13 ಗಂಟೆಗಳ ಕೆಲಸದ ದಿನ. ವಾರದ ವಿಶ್ರಾಂತಿ ಇಲ್ಲ, ಬೋನಸ್, ಉದ್ಯೋಗ ಭದ್ರತೆ ಮತ್ತು ಮೂಲಭೂತ ಸುರಕ್ಷತೆಗಳಿಲ್ಲದೆ ದುಡಿಸಿಕೊಳ್ಳಲಾಗುತ್ತಿದೆ. ಖಾಯಂ ಕಾರ್ಮಿಕರ ಸಮಾನ ಹಕ್ಕುಗಳನ್ನು ನಿರಾಕರಿಸಲಾಗಿದೆ ಎಂದು ದೂರಿದರು.

ಆಹಾರ ಮತ್ತು ಅಗತ್ಯ ವಸ್ತುಗಳ ಬೆಲೆಗಳು ಕೂಡ ಏರಿವೆ. ಕಾರ್ಮಿಕರು, ವಿಶೇಷವಾಗಿ ವಲಸೆ ಕಾರ್ಮಿಕರು, ಬದುಕಿನ ಅಂಚಿನಲ್ಲಿದ್ದಾರೆ. ಸಮಸ್ಯೆಗಳನ್ನು ಪರಿಹರಿಸುವ ಬದಲು, ಬಿಜೆಪಿ ಸರ್ಕಾರ 400 ಕ್ಕೂ ಹೆಚ್ಚು ಕಾರ್ಮಿಕರನ್ನು ಬಂಧಿಸಿ, ಕುಟುಂಬಗಳನ್ನು ಭೀತಿಗೊಳಿಸಲಾಗಿದೆ ಎಂದು ಆರೋಪಿಸಿದರು.

ಟ್ರೇಡ್ ಯೂನಿಯನ್ ನಾಯಕರು, ಸಿಐಟಿಯು ನಾಯಕರು, ಅನಧಿಕೃತವಾಗಿ ಬಂಧಿಸಲ್ಪಟ್ಟಿದ್ದಾರೆ. ಹೋರಾಟವನ್ನು ಬಾಹ್ಯ ವಿರೋಧಿ ಎಂದು ಪ್ರಚಾರ ನಡೆಸಲಾಗುತ್ತಿದೆ. ಬಂಧಿತರನ್ನು ತಕ್ಷಣ ಯಾವುದೇ ಷರತ್ತುಗಳಿಲ್ಲದೆ ಬಿಡುಗಡೆ ಮಾಡಬೇಕು. ಸುಳ್ಳು ಪ್ರಕರಣಗಳನ್ನು ಹಿಂಪಡೆಯಬೇಕು, ದಮನವನ್ನು ನಿಲ್ಲಿಸಬೇಕು ಮತ್ತು ಅನಧಿಕೃತ ಬಂಧನಗಳನ್ನು ರದ್ದುಗೊಳಿಸಬೇಕೆಂದು ಒತ್ತಾಯಿಸಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಪ್ರಧಾನ ಕಾರ್ಯದರ್ಶಿ ಎಂಬಿ.ಪುಷ್ಪ, ಖಜಾಂಚಿ ಅರವಿಂದ, ಹೆಚ್.ಆರ್.ನವೀನ್‌ಕುಮಾರ್, ಪೃಥ್ವಿ, ರಮೇಶ್, ಮಹದೇವ, ಜ್ಯೋತಿ, ವನಜಾಕ್ಷಿ, ಪದ್ಮಲತಾ ಮುಂತಾದವರಿದ್ದರು.

## ಮಾಂಗಲ್ಯ ಸರ ದರೋಡೆ

**ಅರಸೀಕೆರೆ:** ರಸ್ತೆಯಲ್ಲಿ ನಡೆದು ಹೋಗುತ್ತಿದ್ದಾಗ ಬೈಕ್‌ನಲ್ಲಿ ಬಂದ ಕಿಡಿಗೇಡಿಗಳು ಮಹಿಳೆ ಕೊರಳಿನಿಂದ 50 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಹೋಗಿರುವ ಘಟನೆ ನಗರದಲ್ಲಿ ನಡೆದಿದೆ.

ಮಲ್ಲೇಶ್ವರ ನಗರದ ಕೋಮಲ ಅವರು ಸೋಮವಾರ ಪಿಪಿ ವೃತ್ತದಲ್ಲಿ ನಡೆಯುತ್ತಿದ್ದ ಬಸವ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಭಾಗವಹಿಸಿ ನಂತರ ಕಾಲ್ನಡಿಗೆಯಲ್ಲಿ ಮನೆಗೆ ಹೋಗುತ್ತಿದ್ದಾಗ ಕಿಡಿಗೇಡಿಗಳು ಕೃತ್ಯ ಎಸಗಿದ್ದಾರೆ. ಲಕ್ಷ್ಮೀಪುರದ ಬಲಮುರಿ ಗಣಪತಿ ದೇವಸ್ಥಾನ ಬಳಿಹೋಗುತ್ತಿದ್ದಾಗ ಎದುರು ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳು ಸರ ಕಿತ್ತುಕೊಂಡು ಪರಾರಿಯಾಗಿದ್ದಾರೆ. ಅಂದಾಜು 4 ಲ.ರೂ. ಮೌಲ್ಯದ ಸರ ಕಳುವಾಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಹಿಳಾ ಮೀಸಲಾತಿ ಮಸೂದೆಗೆ ಸೋಲು : ಬಿಜೆಪಿ ಧರಣಿ

• ಪ್ರಜೋದಯ ವರದಿ

**ಬೇಲೂರು :** ಮಹಿಳಾ ಮೀಸಲು ಮಸೂದೆಗೆ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸಿರುವುದನ್ನು ಖಂಡಿಸಿ ತಾಲ್ಲೂಕು ಬಿಜೆಪಿ ಮಹಿಳಾ ಮೋರ್ಚಾದಿಂದ ಪಟ್ಟಣದಲ್ಲಿ ಮಂಗಳವಾರ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಶಾಸಕ ಹೆಚ್.ಕೆ.ಸುರೇಶ್ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮಹಿಳೆಯರಿಗೆ ರಾಜಕೀಯ ಸಬಲೀಕರಣ ಮಾಡುವ ಉದ್ದೇಶದಿಂದ ಲೋಕಸಭೆಯಲ್ಲಿ ಮಹಿಳಾ ಮೀಸಲು ಮಸೂದೆ ಜಾರಿಗೆ ಮುಂದಾಗಿದ್ದರೂ, ಕಾಂಗ್ರೆಸ್ ಪಕ್ಷ ಅದನ್ನು ವಿರೋಧಿಸುವ ಮೂಲಕ ತನ್ನ ನಿಜ ಸ್ವರೂಪವನ್ನು ಬಯಲುಗೊಳಿಸಿದೆ ಎಂದು ಆರೋಪಿಸಿದರು.



ಮಹಿಳೆಯರು ಇಂದಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದರೂ, ಪ್ರಜಾಪ್ರಭುತ್ವದಲ್ಲಿ ಅವರ ಪ್ರಾತಿನಿಧ್ಯ ಗ್ರಾಮ ಪಂಚಾಯಿತಿಯಿಂದ ನಗರಸಭೆ ಮಟ್ಟಕ್ಕೆ ಮಾತ್ರ ಸೀಮಿತವಾಗದೆ, ಲೋಕಸಭೆ ಹಾಗು ವಿಧಾನಸಭೆಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾಗಬೇಕೆಂಬ ಆಶಯದಿಂದ ಈ ಮಸೂದೆ ತರಲಾಗಿದೆ. ಆದರೆ, ಕಾಂಗ್ರೆಸ್ ರಾಜಕೀಯ ದುರುದ್ದೇಶದಿಂದ ಅಡ್ಡಿಪಡಿಸಿರುವುದು ಶೋಚನೀಯ. ಕಾಂಗ್ರೆಸ್ ಪಕ್ಷದ ನಾಯಕತ್ವವು ಕೆಲವೇ ಮಹಿಳಾ ಮುಖಂಡರಿಗೆ ಸೀಮಿತವಾಗಿದೆ. ದೇಶದ ಸಾಮಾನ್ಯ ಮಹಿಳೆಯರ ಹಕ್ಕುಗಳ ಬಗ್ಗೆ ತಾತ್ಸಾರ ತೋರಿದೆ. ಈ

» ನಾಲ್ಕನೇ ಪುಟದಲ್ಲಿ

## ನಾಳೆ ಭಗೀರಥ ಜಯಂತಿ

• ಪ್ರಜೋದಯ ವರದಿ

**ಹಾಸನ :** ಹಾಸನಾಂಬ ಕಲಾಕ್ಷೇತ್ರದಲ್ಲಿ ಏ.23 ರಂದು ಬೆಳಿಗ್ಗೆ 11 ಗಂಟೆಗೆ ಭಗೀರಥ ಜಯಂತಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯ ಗೃಹ ಮಂಡಳಿಯ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಅವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸುವರು.

ಸಂಸದ ಶ್ರೇಯಸ್ ಎಂ. ಪಟೇಲ್, ಮಾಜಿ ಸಚಿವ ಹೆಚ್.ಡಿ.ರೇವಣ್ಣ, ಶಾಸಕರಾದ ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ. ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಸದಸ್ಯರು, ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕರಾದ ಅಧ್ಯಕ್ಷ ಪಟೇಲ್ ಶಿವಣ್ಣ, ಸಾಹಿತಿ ಕೋಟ್ರೇಶ್ ಎಸ್.ಉಪ್ಪಾರ್ ಅವರು ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಭಗೀರಥರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಯೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುವುದು.

## ಸರ್ಕಾರಿ ನೌಕರರಿಗೆ ಸಂಸದ ಶ್ರೇಯಸ್ ಪಟೇಲ್ ಸಲಹೆ | ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ

# ಕಾನೂನು ಚೌಕಟ್ಟಿನಲ್ಲಿ ಜನ ಸೇವೆಗೆ ಆದ್ಯತೆ ನೀಡಿ

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ನೌಕರರಲ್ಲಿ ತಾಳ್ಮೆ ಬಹು ಮುಖ್ಯ. ಯಾವುದೇ ಒತ್ತಡವಿದ್ದರೂ ಕಚೇರಿಗಳಿಗೆ ಬರುವ ಸಾರ್ವಜನಿಕರನ್ನು ಗೌರವಯುತವಾಗಿ ಕಾಣುವುದರ ಜೊತೆಗೆ ಕಾನೂನು ಚೌಕಟ್ಟಿನಲ್ಲಿ ಅವರ ಕೆಲಸ ಮಾಡಲು ಆದ್ಯತೆ ನೀಡಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ತಿಳಿಸಿದರು.

ನಗರದ ಹಾಸನಾಂಬ ಕಲಾ ಕ್ಷೇತ್ರದಲ್ಲಿ ಮಂಗಳವಾರ ನಡೆದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗು 2024ನೇ ಮತ್ತು 2025ನೇ ಸಾಲಿನ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಒಂದು ಜಿಲ್ಲೆ ಪ್ರಗತಿ ಕಾಣಬೇಕೆಂದರೆ ಸರ್ಕಾರಿ ನೌಕರರ ಶ್ರಮ ಮುಖ್ಯ ಕಾರಣ. ಜಿಲ್ಲೆಯಲ್ಲಿ ಅಧಿಕಾರಿಗಳು ಹಾಗು ಸಿಬ್ಬಂದಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಜಿಲ್ಲೆ ಎಲ್ಲದರಲ್ಲೂ ಉತ್ತಮ ಸ್ಥಾನದಲ್ಲಿದೆ ಎಂದು ತಿಳಿಸಿದರು.



ಶಾಸಕ ಹೆಚ್.ಪಿ.ಸ್ವರೂಪ್ ಅವರು ಮಾತನಾಡಿ, ಜಿಲ್ಲೆಯ ಸರ್ಕಾರಿ ನೌಕರರು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಜಿಲ್ಲೆಯು ಪ್ರಗತಿ ಶೀಲವಾಗಿದೆ. ಪ್ರಾಮಾಣಿಕವಾಗಿ ಕೆಲಸಕ್ಕೆ ಗೌರವ ನೀಡಬೇಕು. ನಾಗರಿಕರು ಮತ್ತು ಸಾರ್ವಜನಿಕರ ಕೆಲಸಕ್ಕೆ ಹೆಚ್ಚು ಒತ್ತು ನೀಡುವ ಮೂಲಕ ಸಹಕರಿಸಬೇಕು ಎಂದರು.

### ಪ್ರಶಸ್ತಿ ಬೇಕಿಲ್ಲ, ಪ್ರಾಮಾಣಿಕತೆ ಸಾಕು

ನಾವು ಮಾಡುವ ಕೆಲಸಕ್ಕೆ ಪ್ರಶಸ್ತಿ ಬೇಕಿಲ್ಲ, ಮಾಡುವ ಕೆಲಸದಲ್ಲಿ ಪ್ರಾಮಾಣಿಕತೆ ಇದ್ದರೆ ಸಾಕು. ಸಂವಿಧಾನದ ಚೌಕಟ್ಟಿನೊಳಗೆ ಕೆಲಸ ಮಾಡುವ ಸರ್ಕಾರಿ ನೌಕರರಿಗೆ ಪ್ರತಿ ದಿನವೂ ಹೊಸ ದಿನವಾಗಿರಬೇಕು. ಆದ್ದರಿಂದ ಉತ್ಸಾಹದಿಂದ ಕೆಲಸ ಮಾಡಬೇಕು. ಸಾರ್ವಜನಿಕರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸಮಸ್ಯೆಗೆ ಸೂಕ್ತವಾದ ಪರಿಹಾರವನ್ನು ಅಧಿಕಾರಿಗಳು ನೀಡಬೇಕು ಹಾಗು ಯಾವುದೇ ಕೆಲಸವಾದರೂ ಸಹ ಆ ಕೆಲಸದ ಮೇಲೆ ಶ್ರದ್ಧೆ, ಬದ್ಧತೆ ಮತ್ತು ನಿಷ್ಠೆ ಇರಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಹೇಳಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಾತನಾಡಿ, ಕೆಲಸ ಮಾಡುವಾಗ ಯಾವ ಕೆಲಸವೂ ಸಣ್ಣ ಕೆಲಸ, ದೊಡ್ಡ ಕೆಲಸವೆಂದು ಇರುವುದಿಲ್ಲ. ಎಲ್ಲಾ ಕೆಲಸವೂ ಒಂದೇ. ಕೆಲಸ ಯಾವುದೇ ಆಗಿರಲಿ ಮಾಡುವ ಹಂಬಲ ಪ್ರತಿಯೊಬ್ಬರಲ್ಲೂ ಇರಬೇಕು. ನೌಕರರು ಕೆಲಸದ ಜವಾಬ್ದಾರಿಯನ್ನು ನಿರ್ವಹಿಸುವುದರ ಜೊತೆಗೆ, ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನಹರಿಸಿಬೇಕು. ಆರೋಗ್ಯ ಸಮತೋಲನದಲ್ಲಿದ್ದರೆ ತಾವು ತೆಗೆದುಕೊಂಡ ನಿರ್ಧಾರ ಹಾಗೂ ನಿರ್ಣಯಗಳು ಕೂಡ ಸರಿಯಾಗಿರುತ್ತವೆ. ಸರ್ಕಾರಿ ನೌಕರರು ಧನಾತ್ಮಕ ಚಿಂತನೆಗಳೊಂದಿಗೆ ಕೆಲಸ ಮಾಡುವುದರ ಮೂಲಕ ದೇಶ, ರಾಜ್ಯ, ಜಿಲ್ಲೆಯ ಆಸ್ತಿಯಾಗಿ ಎಂದು ನೌಕರರಿಗೆ ಸಲಹೆ ನೀಡಿದರು.

» ನಾಲ್ಕನೇ ಪುಟದಲ್ಲಿ

## ಅಪಘಾತದಲ್ಲಿ ಛಾಯಾಗ್ರಾಹಕ ಸಾವು

• ಪ್ರಜೋದಯ ವರದಿ

**ಅರಕಲಗೂಡು:** ಎರಡು ಕಾರುಗಳ ನಡುವೆ ಸಂಭವಿಸಿದ ಡಿಕ್ಕಿಯಲ್ಲಿ ಛಾಯಾಗ್ರಾಹಕ ಮೃತಪಟ್ಟಿರುವ ಘಟನೆ ತಾಲ್ಲೂಕಿನ ರಾಮನಾಥಪುರ-ಸಾಲಿಗ್ರಾಮ ಮಾರ್ಗ ಮಧ್ಯೆ ಮಂಗಳವಾರ ನಡೆದಿದೆ.



ಕೊಣನೂರು ಹೋಬಳಿಯ ಕಟ್ಟೇಪುರ ಗ್ರಾಮದ ನವೀನ್ (30) ಮೃತರು. ಕಾರ್ಯಕ್ರಮಕ್ಕೆ ಕಾರಿನಲ್ಲಿ ತೆರಳುತ್ತಿದ್ದಾಗ ಎದುರಿನಿಂದ ಬಂದ ಕಾರು ಡಿಕ್ಕಿ ಹೊಡೆದಿದೆ. ತಲೆ ಹಾಗು ಹೊಟ್ಟೆ ಭಾಗಕ್ಕೆ ಪೆಟ್ಟು ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರಿಗೆ ಹೆಂಡತಿ ಮತ್ತು ಪುಟ್ಟ ಮಗುವಿದೆ. ತಾಲ್ಲೂಕು ಛಾಯಾಗ್ರಾಹಕರ ಸಂಘ ಸಂತಾಪ ಸೂಚಿಸಿದೆ. ಸಾಲಿಗ್ರಾಮ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಿಂದಿ ಭಾಷೆಗೆ ಗ್ರೇಡ್ ಬದಲು ಅಂಕಗಳನ್ನೇ ನೀಡಿ

## ಪುನರ್ ಪರಿಶೀಲನಾ ಅರ್ಜಿ ವಜಾಗೊಳಿಸಿದ ಹೈಕೋರ್ಟ್ ತಪರಾಕಿ: ರಾಜ್ಯಸರ್ಕಾರಕ್ಕೆ ಮತ್ತೆ ಮುಖಭಂಗ

• ಪ್ರಜೋದಯ ವರದಿ



**ಬೆಂಗಳೂರು: ಪ್ರಸಕ್ತ** ಸಾಲಿನ ಎಸ್‌ಎಸ್‌ಎಲ್‌ಸಿ ಮೂರನೇ ಭಾಷಾ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಏಪ್ರಿಲ್ 15ರಂದು ನೀಡಿದ್ದ ಆದೇಶದಲ್ಲಿ ಹಸ್ತಕ್ಷೇಪ ಮಾಡಲು ಹೈಕೋರ್ಟ್ ಮಂಗಳವಾರ ನಿರಾಕರಿಸಿದೆ. ರಾಜ್ಯ ಸರ್ಕಾರ ಪ್ರಸ್ತಾಪಿಸಿದ್ದ ಗ್ರೇಡಿಂಗ್ ಪದ್ಧತಿಗೆ ಬದಲಾವಣೆ ಮಾಡುವ ಬೇಡಿಕೆಯನ್ನು ನ್ಯಾಯಾಲಯ ತಳ್ಳಿ ಹಾಕಿ ತನ್ನ ಆದೇಶದ ಯಥಾಸ್ಥಿತಿ ಕಾಯ್ದುಕೊಂಡಿದೆ.

ನ್ಯಾಯಮೂರ್ತಿ ಇ.ಎಸ್. ಇಂಡಿರೇಶ್ ಅವರು, ಏಪ್ರಿಲ್ 15ರ ಆದೇಶವನ್ನು ಮರು ಪರಿಶೀಲಿಸಲು ರಾಜ್ಯ ಸರ್ಕಾರ ಸಲ್ಲಿಸಿದ್ದ ಪುನರ್ ಪರಿಶೀಲನಾ ಅರ್ಜಿಯನ್ನು ವಜಾಗೊಳಿಸುವ ಮೂಲಕ ಈ ಆದೇಶ ನೀಡಿದ್ದಾರೆ.

ಪರೀಕ್ಷೆಗಳ ಪ್ರಕಟಣೆಗೂ ಮುನ್ನ ಜಾರಿಯಲ್ಲಿದ್ದ ನಿಯಮಾವಳಿಗಳ ಪ್ರಕಾರ ಮೌಲ್ಯಮಾಪನ ವ್ಯವಸ್ಥೆಯನ್ನು ಮುಂದುವರಿಸುವುದು ಸರ್ಕಾರದ ಕರ್ತವ್ಯವಾಗಿದ್ದು, ಅದರಿಂದ ವಿಮುಖರಾಗಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಪುನರುಚ್ಚರಿಸಿದೆ.

ಏಪ್ರಿಲ್ 15ರ ಆದೇಶದಲ್ಲಿ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ ಶೆಟ್ಟಿ ಅವರು ಕೇಳಿದ್ದ ಕೆಲವು ತಿದ್ದುಪಡಿಗಳನ್ನು ಪರಿಗಣಿಸಿ, ಅಗತ್ಯ ನಿಯಮಗಳಿಗೆ ಕಾನೂನುಬದ್ಧ ತಿದ್ದುಪಡಿ ಮಾಡಿ ಗ್ರೇಡಿಂಗ್ ಪದ್ಧತಿಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಮುಂದಾದರೆ, ಅದಕ್ಕೆ ನ್ಯಾಯಾಲಯ ಅಡ್ಡಿಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ರಾಜ್ಯ ಸರ್ಕಾರವೇ 202526ನೇ ಶೈಕ್ಷಣಿಕ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾಪನವನ್ನು ಪರೀಕ್ಷಾ ಪ್ರಕಟಣೆ ದಿನಾಂಕದ ವೇಳೆಗೆ ಜಾರಿಯಲ್ಲಿದ್ದ ನಿಯಮಗಳ ಪ್ರಕಾರ ನಡೆಸಲಾಗುತ್ತದೆ ಎಂದು ತಿಳಿಸಿದ್ದ ಹಿನ್ನೆಲೆಯಲ್ಲಿ, ಏಪ್ರಿಲ್ 15ರಂದು ಹೈಕೋರ್ಟ್ ಅದನ್ನೇ ಅನುಸರಿಸಲು ನಿರ್ದೇಶನ ನೀಡಿತ್ತು.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಮೂರನೇ ಭಾಷಾ ಮೌಲ್ಯಮಾಪನದಲ್ಲಿ ಗ್ರೇಡಿಂಗ್ ಪದ್ಧತಿ ಪರಿಚಯಿಸುವ ಕುರಿತು ನೀಡಿದ ಹೇಳಿಕೆಯಿಂದ ಆತಂಕಗೊಂಡ ಮೂವರು ವಿದ್ಯಾರ್ಥಿಗಳು ಸಲ್ಲಿಸಿದ್ದ ಅರ್ಜಿಯ ಮೇಲೆ ವಿಚಾರಣೆ ನಡೆಸಿ, ನ್ಯಾಯಾಲಯ ಈ ಆದೇಶ ನೀಡಿತ್ತು.

ಚಿಕ್ಕಮಗಳೂರು ಜಿಲ್ಲೆಯ ಸಹನಾ ಆರ್ ನಾಯ್ಕ್ ಹಾಗೂ ಉಡುಪಿ ಜಿಲ್ಲೆಯ ಅನುಷಾ ಮತ್ತು ಸುಧೀಕ್ಷಾ ಎಂಬ ವಿದ್ಯಾರ್ಥಿನಿಯರು, 2025ರ ಅಕ್ಟೋಬರ್ 28ರಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಹೊರಡಿಸಿದ್ದ ಸರ್ಕ್ಯೂಲರ್ ಪ್ರಕಾರ ಮೌಲ್ಯಮಾಪನ ನಡೆಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಹೈಕೋರ್ಟ್‌ಗೆ ಮನವಿ ಮಾಡಿದ್ದರು.

ವಿಚಾರಣೆ ವೇಳೆ ಹೆಚ್ಚುವರಿ ಸರ್ಕಾರಿ ವಕೀಲರು, ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ದಿನಾಂಕಕ್ಕೆ ಜಾರಿಯಲ್ಲಿದ್ದ ನಿಯಮಾವಳಿಗಳ ಪ್ರಕಾರವೇ ಮೌಲ್ಯಮಾಪನ ನಡೆಸಲಾಗುವುದು ಎಂದು ವಿವರಣೆ ನೀಡಿದರು.

ಅದನ್ನು ದಾಖಲಿಸಿಕೊಂಡ ನ್ಯಾಯಾಲಯ, 202526ನೇ ಸಾಲಿನ ಪರೀಕ್ಷೆಯ ಪ್ರಕಟಣೆ ದಿನಾಂಕದ ವೇಳೆಗೆ ಜಾರಿಯಲ್ಲಿದ್ದ ನಿಯಮಗಳನ್ನು ಅನುಸರಿಸಿ ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾಪನ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

### ಆದೇಶ ಪಾಲಿಸುತ್ತೇವೆ: ಸಿ.ಎಂ. ಸಿದ್ದರಾಮಯ್ಯ

**ಚಾಮರಾಜನಗರ:** ತೃತೀಯ ಭಾಷೆ ಹಿಂದಿಗೆ ಈ ವರ್ಷಕ್ಕೆ ಅಂಕ ನೀಡುವಂತೆ ಹೈಕೋರ್ಟ್ ನೀಡಿರುವ ಆದೇಶವನ್ನು ಪಾಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಗುಂಡ್ಲುಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೃತೀಯ ಭಾಷೆಗೆ ಹಿಂದಿನ ವರ್ಷಗಳಂತೆಯೇ ಮೌಲ್ಯಮಾಪನ ಮಾಡಿ ಅಂಕಗಳನ್ನು ನೀಡಬೇಕೆಂದು ಉಚ್ಚನ್ಯಾಯಾಲಯ ಹೇಳಿದ್ದು, ಮುಂದಿನ ತೀರ್ಮಾನ ಮಾಡಲು ಸೂಚಿಸಿದ್ದು, ನ್ಯಾಯಾಲಯದ ನಿರ್ದೇಶನವನ್ನು ಪಾಲಿಸಲಾಗುವುದು ಎಂದರು.

ಕೇಂದ್ರ ಸರ್ಕಾರ ಕಾಂಗ್ರೆಸ್‌ನವರನ್ನು ಗುರಿಯಾಗಿಸಿ ದಾಳಿ ಮಾಡುತ್ತಿದ್ದು ಬಿಜೆಪಿಯವರ ಮೇಲೆ ದಾಳಿ ಆಗುತ್ತಿಲ್ಲ. ಶಾಸಕ ಹ್ಯಾರಿಸ್ ಅವರ ಪುತ್ರ ನಲಪಾಡ್ ಅವರ ಮನೆ ಮೇಲೆ ಇಡಿ ದಾಳಿಯಾಗಿವೆ ಎಂದು ಸಿದ್ದರಾಮಯ್ಯ ಅವರು ಆರೋಪಿಸಿದರು.



ಹಾರನಹಳ್ಳಿ: ಪಟ್ಟಣದಲ್ಲಿ ಸೋಮವಾರ ಸಂಜೆ ಬಸವ ಜಯಂತಿ ಪ್ರಯುಕ್ತ ಶ್ರೀ ಜೇನು ಕಲ್ಲು ಸಿದ್ದೇಶ್ವರ ಸ್ವಾಮಿ ಹಾಗೂ ಬಸವೇಶ್ವರ ಭಾವಚಿತ್ರವನ್ನು ಹೂವಿನ ಫಲಕ್ಕಿಯಲ್ಲಿ ಉತ್ಸ ವ ವಾಹನ ದಲ್ಲಿ ವಿಶೇಷವಾಗಿ ಹೂವಿನ ಅಲಂಕಾರ ಮಾಡಿ ಉತ್ಸವ ನಡೆಸಲಾಯಿತು.
ಉತ್ಸವದಲ್ಲಿ ನಂದಿ ಧ್ವಜ, ಧೂತರಾಯಸ್ವಾಮಿ, ವೀರಭದ್ರ ಸ್ವಾಮಿ, ಸೋಮನ ಕುಣಿತ ಆಕರ್ಷಣೆಯಾಗಿತ್ತು. ಕರಡೆ ಮಜಲು ವಾದ್ಯ ಉತ್ಸವಕ್ಕೆ ಮೆರಗು ನೀಡಿತ್ತು. ಉತ್ಸವದಲ್ಲಿ ವೀರಶೈವ ಸಮಾಜದ ಮುಖಂಡರು, ಭಕ್ತಾಧಿಗಳು ಹಾಗೂ ಗ್ರಾಮಸ್ಥರುಗಳು ಉತ್ಸವದಲ್ಲಿ ಭಾಗವಹಿಸಿದ್ದರು.

# ರಾಜ್ಯಮಟ್ಟದ 'ಎಕ್ಸ್‌ಪ್ಲೋರಿಕಾ' ಉದ್ಘಾಟನೆ

• ಪ್ರಜೋದಯ ವರದಿ



**ಹಾಸನ:** ನಗರದ ಬಿ.ಕಾಟಿಹಳ್ಳಿ ಯಲ್ಲಿರುವ ಸಂತ ಜೋಸೆಫರ ಕಾಲೇಜಿನಲ್ಲಿ 2026 ನೇ ಸಾಲಿನ ''ಎಕ್ಸ್‌ಪ್ಲೋರಿಕಾ'' ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ಫಾದರ್ ಫಿಲಿಕ್ಸ್ ಎಸ್.ಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಬೆಳಗಿಸಲು ಇಂತಹ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿವೆ ಎಂದು ಅಭಿಪ್ರಾಯಪಟ್ಟರು.

ಪ್ರಾಂಶುಪಾಲ ಫಾ. ಮ್ಯಾಕ್ಸಿಮ್ ಡಯಾಸ್ ಎಸ್.ಜೆ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸ ಮತ್ತು ಸಮಗ್ರ ಬೆಳವಣಿಗೆಗೆ ಇಂತಹ ಚಟುವಟಿಕೆಗಳು ಸಹಾಯಕವಾಗುತ್ತವೆ ಎಂದು ಹೇಳಿದರು ಹಾಗೂ ಭಾಗವಹಿಸಿದ ಎಲ್ಲರಿಗೂ ಶುಭಾಶಯ ಕೋರಿದರು.

ಕಾಲೇಜಿನ ಸ್ಟುಡೆಂಟ್ ಗೌರ್ನರ್ ಅನಿಲ್ ಎಂ.ಎಸ್. ಅವರು ಮಾತನಾಡಿ, ಕಾರ್ಯಕ್ರಮದ ರೂಪುರೇಷುಗಳ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಯಲ್ ಎನ್ಫೀಲ್ಡ್ ಬೈಕ್ ಸ್ಟಂಟ್, ಬಾಕ್ಸ್ ಕ್ರಿಕೆಟ್, ಇ-ಸ್ಪೋರ್ಟ್ಸ್, ಬಿಸಿನೆಸ್ ಕ್ವಿಜ್, ಚರ್ಚಾ ಸ್ಪರ್ಧೆ, ಟೀಮ್ ಬಿಲ್ಡಿಂಗ್, ಮೇಹೆಂದಿ, ಗುಂಪು ನೃತ್ಯ, ರೀಲ್ಸ್ ಮೇಕಿಂಗ್, ಗ್ರೂಪ್ ಸಾಂಗ್, ಫ್ಯಾಶನ್ ವಾಕ್ ಹಾಗೂ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳು, ಪ್ರೇಕ್ಷಕರ ಗಮನ ಸೆಳೆದವು.

ಸುಮಾರು 600 ಮಂದಿ ವಿವಿಧ ಪದವಿ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಪರಿಶ್ರಮದಿಂದ ದುಡಿದು ಸ್ವಾವಲಂಬಿ ಜೀವನ ನಡೆಸಿ

## 69 ಕುಶಲಕರ್ಮಿಗಳಿಗೆ ಯಂತ್ರೋಪಕರಣ ವಿತರಣೆ: ಸಿಮೆಂಟ್ ಮಂಜು

• ಪ್ರಜೋದಯ ವರದಿ



**ಸಕಲೇಶಪುರ:** ದುಡಿಯುವ ವರ್ಗದವರು ದುಷ್ಚಟಗಳಿಗೆ ಬಿದ್ದು ಜೀವನ ಹಾಳು ಮಾಡಿಕೊಳ್ಳುವುದಕ್ಕಿಂತ ತಮ್ಮ ತಮ್ಮ ವೃತ್ತಿ ಕ್ಷೇತ್ರದಲ್ಲಿ ಹಠ ಹಾಗೂ ಪರಿಶ್ರಮದಿಂದ ದುಡಿದರೆ ಸ್ವಾವಲಂಬಿ ಜೀವನ ನಡೆಸಲು ಸಾಧ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ವತಿಯಿಂದ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ವಿವಿಧ ವೃತ್ತಿ ಆಧಾರಿತ 69 ಕುಶಲಕರ್ಮಿಗಳಿಗೆ ಯಂತ್ರೋಪಕರಣಗಳನ್ನು ವಿತರಿಸಿ ಅವರು ಮಾತನಾಡಿ, ಸಮಾಜದ ಎಲ್ಲ ವರ್ಗದವರೂ ತಮ್ಮ ವೃತ್ತಿಗೆ ಅಗತ್ಯವಾದ ಸಾಧನಗಳನ್ನು ಪಡೆದು ಸ್ವಾವಲಂಬಿಗಳಾಗಬೇಕು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಸಕಾರಾತ್ಮಕವಾಗಿ ಬಳಸಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ಸಲಹೆ ನೀಡಿದರು.

ಮಂಗಳವಾರ ಹೊಲಿಗೆ ಯಂತ್ರ 28, ಎಲೆಕ್ಟ್ರಿಕಲ್ ಪರಿಕರ 6, ಮರಗೆಲಸ ಪರಿಕರ 15, ಗಾರೆಕೆಲಸ ಪರಿಕರ 18, ಕ್ಷೌರಿಕ ಪರಿಕರ 2 ವನ್ನು ವಿತರಿಸಿದ್ದೇನೆ ಎಂದು ಹೇಳಿದರು.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಉಪ ನಿರ್ದೇಶಕ ರವಿಪ್ರಸಾದ್ ಮಾತನಾಡಿ, ಮರ ಕೆಲಸ, ಗಾರೆ ಕೆಲಸ, ಹೊಲಿಗೆ, ಧೋಬಿ, ಎಲೆಕ್ಟ್ರಿಕಲ್ ವೈರಿಂಗ್, ಮೋಟಾರ್ ರಿವೈಂಡಿಂಗ್ ಹಾಗೂ ಬೋರ್‌ವೆಲ್ ದುರಸ್ತಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಸರ್ಕಾರದಿಂದ ಈ ನೆರವು ನೀಡಲಾಗುತ್ತಿದೆ. ಆಯ್ಕೆಯಾದ ಫಲಾನುಭವಿಗಳಿಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯದೊಂದಿಗೆ ಸಹಾಯಧನ ನೀಡಲಾಗುತ್ತಿದ್ದು, ಇದು ಉದ್ಯಮ ವಿಸ್ತರಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಕೈಗಾರಿಕಾ ವಿಸ್ತರಣಾ ಅಧಿಕಾರಿ ಆನಂದ್ ಸೇರಿದಂತೆ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಮತ್ತಿತರೆ ಫಲಾನುಭವಿಗಳು ಉಪಸ್ಥಿತರಿದ್ದರು.

### ಅರೇ ಕಲ್ಲಮ್ಮದೇವಿ ರಥೋತ್ಸವ ನಾಳೆಯಿಂದ

**ಚನ್ನರಾಯಪಟ್ಟಣ:** ತಾಲ್ಲೂಕಿನ ನುಗ್ಗೇಹಳ್ಳಿ ಗ್ರಾಮದ ಆದಿಶಕ್ತಿ ಅರೇಕಲ್ಲಮ್ಮ ದೇವರ 15ನೇ ಜಾತ್ರಾ ಮಹೋತ್ಸ ವ ಹಾಗೂ ರಥೋತ್ಸ ವ ಅಂಗವಾಗಿ ಏಪ್ರಿಲ್ 23. 24ರಂದು ವಿಶೇಷ ಪೂಜೆ ಹೋಮ ಹವನಗಳು ನಡೆಯಲಿವೆ ಎಂದು ದೇವಾಲಯದ ಧರ್ಮದರ್ಶಿ ಪ್ರವೀಣ್ ಗುರೂಜಿ ತಿಳಿಸಿದರು.

ಪ್ರತಿ ವರ್ಷದಂತೆ ಈ ವರ್ಷವೂ ಜಾತ್ರಾ ಮಹೋತ್ಸ ವ ಹಾಗೂ ರಥೋತ್ಸ ವ ಅಂಗವಾಗಿ ಏಪ್ರಿಲ್ 23ರ ಗುರುವಾರ ಬೆಳಗ್ಗೆ ಮಹಾ ಚಂಡಿಕಾ ಹೋಮ ಮಧ್ಯಾಹ್ನ 12 ಗಂಟೆವರೆಗೆ ನೆರವೇರಲಿದೆ.

ರಥೋತ್ಸವ ಅಂಗವಾಗಿ ಬೆಳಗ್ಗೆಯಿಂದಲೇ ಅಮ್ಮನವರಿಗೆ ವಿಶೇಷ ಪೂಜೆ ಅಲಂಕಾರ ನೆರವೇರಿದ ನಂತರ ವಿವಿಧ ಉತ್ಸವಗಳು ಭಕ್ತರ ಸಮ್ಮುಖದಲ್ಲಿ ನಡೆಯಲಿವೆ.

# ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಗೆ ತಂದ ಕೀರ್ತಿ ಬಸವಣ್ಣನವರದ್ದು

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಅನುಭವ ಮಂಟಪದ ಮೂಲಕ ಇಡೀ ಮನು ಕುಲದ ಉದ್ಧಾರಕ್ಕಾಗಿ, ಸರ್ವರ ಕಲ್ಯಾಣಕ್ಕಾಗಿ, ಮನುಷ್ಯ ಜಾತಿ ಒಂದೇ ಎಂದು ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಗೆ ತಂದ ಕೀರ್ತಿ ಮತ್ತು ಶ್ರೇಯಸ್ಸು ಬಸವಣ್ಣನವರಿಗೆ ಸಲ್ಲುತ್ತದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಅವರು ತಿಳಿಸಿದರು.

ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿ ತಾಲ್ಲೂಕು ಆಡಳಿತ ಹಾಗೂ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಜಗಜ್ಯೋತಿ ಬಸವೇಶ್ವರರ ಜಯಂತ್ಯುತ್ಸವದಲ್ಲಿ ಬಸವಣ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಹನ್ನೆರಡನೇ ಶತಮಾನದ ಕ್ರಾಂತಿ ಪುರುಷ ಬಸವಣ್ಣ ವಿಶ್ವದಲ್ಲೇ ಮೊದಲ ಬಾರಿಗೆ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಜಾರಿ ಮಾಡಿದ ಪುಣ್ಯ ಪುರುಷರಾಗಿದ್ದಾರೆ. ಜಾತಿ, ಧರ್ಮ, ಮತ ಭೇದ ಮರೆತು ಮನುಷ್ಯ ಜಾತಿಯನ್ನು ಒಗ್ಗೂಡಿಸಿ ಎಲ್ಲರೂ ಒಂದೇ ಎಂಬ ಸಂದೇಶ ಸಾರಿದರು. ಅನುಭವ ಮಂಟಪ ಎಂಬ ಸಂಸತ್ ರಚನೆ ಮಾಡಿ ಇಡೀ ವಿಶ್ವಕ್ಕೆ ಮಾದರಿಯಾಗಿದ್ದ ಬಸವಣ್ಣ ಇಂದಿಗೂ ಪ್ರಸ್ತುತರಾಗುತ್ತಾರೆ. ಇವರ ಚಿಂತನೆಗಳೇ ಕ್ರಾಂತಿಕಾರಿಯಾಗಿತ್ತು. ಇಡೀ ಸಮಾಜವನ್ನು ಸಮಸಮಾಜ ಮಾಡುವತ್ತ ಇದ್ದ ಇವರ ಕಾಳಜಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಮೇಗಲಕೇರಿಯ ಬಸವೇಶ್ವರ ವೃತ್ತದಲ್ಲಿ ಜಗಜ್ಯೋತಿ ಬಸವೇಶ್ವರ ಪುತ್ಥಳಿಯನ್ನು ಪ್ರತಿಷ್ಠಾಪಿಸಲು ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರ್ ಪವನ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್, ಕೆಡಿಪಿ ಸದಸ್ಯ ಮಹೇಶ್ ಕಬ್ಬಾಳು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್‌ಗೌಡ, ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷ ಜಿ.ಆರ್. ಮೂರ್ತಿ, ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ನಿರ್ದೇಶಕ ಎ.ಪಿ. ನಂದೀಶ, ಖಜಾಂಚಿ ಎಂ.ಎಸ್. ಸುರೇಶ್, ಯುವ ಘಟಕದ ನಿರ್ದೇಶಕರಾದ ಟಿ.ಪಿ.ಮಂಜುನಾಥ, ಎಂ.ಎಸ್.ಸತೀಶ್, ಸಮಾಜದ ಮುಖಂಡರಾದ ನಿವೃತ್ತ ಶಿಕ್ಷಕ ಸಿದ್ದೇಶ್, ಪ್ರಭುಸ್ವಾಮಿ ಉಪಸ್ಥಿತರಿದ್ದರು.

# ಅಂತರರಾಷ್ಟ್ರೀಯ ಕ್ರೀಡಾಪಟು ಪ್ರೀತಂಗೆ ನಾಳೆ ಅಭಿನಂದನೆ

• ಪ್ರಜೋದಯ ವರದಿ



**ಹಾಸನ:** ಆಚಾರ್ಯ ವಾಣಿಜ್ಯ ಪಿಯು ಹಾಗೂ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಏ.23 ರಂದು ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಆಚಾರ್ಯ ಶಿಕ್ಷಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಅಂತರರಾಷ್ಟ್ರೀಯ ಜಾವಲಿನ್ ಪ್ರಶಸ್ತಿ ಪುರಸ್ಕೃತ ಕ್ರೀಡಾಪಟು ಪ್ರೀತಂ ಆರ್. ಅವರಿಗೆ ಅಭಿನಂದನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾಲೇಜಿನ ಪ್ರಾಚಾರ್ಯ ಡಾ.ಆದರ್ಶ ತಿಳಿಸಿದರು.

ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಹಾಸನ ಜಿಲ್ಲೆಯ ಉತ್ತಮ ಕ್ರಿಯಾಶೀಲ ಶ್ರೇಷ್ಠ ಶಿಕ್ಷಕರನ್ನು ಗುರುತಿಸಿ ಅವರನ್ನು ಗುರುತಿಸುವ ಕೆಲಸ ನಮ್ಮ ಕಾಲೇಜಿನ ವತಿಯಿಂದ ಮಾಡುತ್ತಿದ್ದೇವೆ. ಈ ವರ್ಷದ ದ್ವಿತೀಯ ವರ್ಷದ ಪಿ.ಯು.ಸಿ.ಯಲ್ಲಿ 100ರಷ್ಟು ಫಲಿತಾಂಶ ನಮ್ಮ ಕಾಲೇಜಿಗೆ ಬಂದಿದೆ. ಎಸ್ ಎಸ್ ಎಲ್ ಸಿ ಅಂಕಗಳು ಎಷ್ಟೇ ಇದ್ದರೂ ಸಹ ಉತ್ತೀರ್ಣವಾದ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಂಡು ದ್ವಿತೀಯ ಪಿಯುಸಿ ಯಲ್ಲಿ ಡಿಸ್ಟಿಂಕ್ಷನ್ ದರ್ಜೆಯಲ್ಲಿ ತೇರ್ಗಡೆಯಾಗುವಂತೆ ತರಬೇತುಗೊಳಿಸಲಾಗುವುದು ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ತುಮಕೂರಿನ ಹಿರೇಮಠ ತಪೋವನದ ಪೀಠಾಧ್ಯಕ್ಷರಾದ ಡಾ. ಶಿವಾನಂದ ಶಿವಾಚಾರ್ಯ ಮಹಾಸ್ವಾಮೀಜಿಯವರು ವಹಿಸಿ ಆಶೀರ್ವಚನ ನೀಡಲಿದ್ದಾರೆ. ಪ್ರಾಸ್ತಾವಿಕ ನುಡಿಯನ್ನು ಕಾಲೇಜಿನ ಪ್ರಾಶುಪಾಲ ಡಾ. ಆದರ್ಶ ನುಡಿಯಲಿದ್ದಾರೆ. ಉದ್ಘಾಟನೆಯನ್ನು ಡಾ.ವಿ. ಮಂಜುನಾಥ್ ಉಪ ಆಯುಕ್ತರು ಹಾಗೂ ವಿಶೇಷ ಭೂ ಸ್ವಾಧೀನಾಧಿಕಾರಿಗಳು ಜಿಲ್ಲಾಧಿಕಾರಿಗಳ ಕಚೇರಿ ಹಾಸನ ಇವರು ನೆರವೇರಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಅಧ್ಯಕ್ಷತೆಯನ್ನು ಜ್ಞಾನ ಎಜ್ಯುಕೇಶನ್ ಟ್ರಸ್ಟ್ ಅಧ್ಯಕ್ಷ ಕೆ.ಆರ್. ಹರೀಶ್ ವಹಿಸಲಿದ್ದಾರೆ. ಪ್ರಶಸ್ತಿ ವಿಜೇತ ಶಿಕ್ಷಕರಿಗೆ ಆಚಾರ್ಯ ಶಿಕ್ಷಕ ರತ್ನ ಪ್ರಶಸ್ತಿಯನ್ನು ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಅಧ್ಯಕ್ಷ ಶಿವಾನಂದ ತಗಡೂರು ಅವರು ನೀಡಿ ಗೌರವಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಾಸನ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ.ಲೋಕೇಶ್, ಹಾಸನ ಜಿಲ್ಲಾ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ್ ಹೆಚ್.ಎಸ್. ಹಾಗೂ ಮಾನವ ಹಕ್ಕುಗಳ ಮಹಾ ಮೈತ್ರಿ ಅಧ್ಯಕ್ಷ ಹೆಚ್.ಎಸ್. ವಿಶ್ವನಾಥ್ ಉಪಸ್ಥಿತರಿರಲಿದ್ದಾರೆ ಎಂದು ಅವರು ತಿಳಿಸಿದರು.

# ವೈಡಿಡಿ ಕಾಲೇಜಿನ ಕಬಡ್ಡಿ ತಂಡಕ್ಕೆ ಗೆಲುವು



• ಪ್ರಜೋದಯ ವರದಿ

**ಬೇಲೂರು:** ಚನ್ನರಾಯಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಪುರುಷರ ವಿಭಾಗದ ಹಾಸನ ವಿಶ್ವವಿದ್ಯಾಲಯ ಮಟ್ಟದ ಅಂತರ ಕಾಲೇಜು ಕಬ್ಬಡಿ ಪಂದ್ಯಾವಳಿಯಲ್ಲಿ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಹಾಸನ ವಿಶ್ವವಿದ್ಯಾಲಯ ಅಂತರ ಕಾಲೇಜು ಪುರುಷರ ವಿಭಾಗದ ಕಬ್ಬಡಿ ಪಂದ್ಯಾವಳಿಯಲ್ಲಿ ಗೆದ್ದು ಕಾಲೇಜಿಗೆ ಹಿರಿಮೆ ತಂದಿದೆ.

ಪಂದ್ಯಾವಳಿಯಲ್ಲಿ ಹಾಸನ ಜಿಲ್ಲೆಯ ಸುಮಾರು 20 ಪದವಿ ಕಾಲೇಜುಗಳು ಭಾಗವಹಿಸಿದ್ದು, ಇದರಲ್ಲಿ ವೈಡಿಡಿ ಕಾಲೇಜ್ ಪ್ರಥಮ ಬಹುಮಾನ ಪಡೆದಿದೆ. ಕಾಲೇಜಿನ ಪ್ರಾಂಶುಪಾಲರಾದ ಡಾ.ಎಚ್.ಎಂ. ಮಹೇಶ್ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಶಾಸಕ ಹುಲ್ಲಳ್ಳಿ ಸುರೇಶ್, ಶಿಕ್ಷಣ ನಿರ್ದೇಶಕ ಬಾಬು ಪ್ರಸಾದ್ ಹಾಗೂ ಬೋಧಕ ಬೋಧಕೇತರ ಸಿಬ್ಬಂದಿಗಳು ವಿಜೇತ ತಂಡವನ್ನು ಅಭಿನಂದಿಸಿದ್ದಾರೆ.

# ಅಕ್ರಮ ಮದ್ಯ ಮಾರಾಟ: ಗ್ರಾಮಸ್ಥರು- ಅಬಕಾರಿ ಅಧಿಕಾರಿಗಳ ಸಭೆ

• ಪ್ರಜೋದಯ ವರದಿ



**ಬೇಲೂರು:** ತಾಲ್ಲೂಕಿನ ಬಿಕ್ಕೋಡು ಹೋಬಳಿ ಕುಶಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಚಿಲ್ಲರೆ ಅಂಗಡಿ ಹಾಗೂ ಕೆಲವು ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದ್ದು ಇದರಿಂದ ಗ್ರಾಮದ ನೆಮ್ಮದಿ ಹಾಳಾಗುವುದಲ್ಲದೆ, ಅನೇಕ ಸಾವು ನೋವುಗಳು ಸಂಭವಿಸಿದ್ದು ಮದ್ಯ ಮಾರಾಟ ತಡೆಗಟ್ಟಲು ಮಂಗಳವಾರ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಸ್ಥರು ಕುಶಾವರ ಗ್ರಾಮ ಪಂಚಾಯಿತಿ ಆವರಣದಲ್ಲಿ ಅಬಕಾರಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮದ್ಯಮುಕ್ತ ಮಾಡಲು ತೀರ್ಮಾನಿಸಲಾಯಿತು.

ಕುಡುಕರ ಹಾವಳಿಯಿಂದ ಕೆಲವು ಗ್ರಾಮಗಳಲ್ಲಿ ರಾತ್ರಿ ವೇಳೆ ಮಹಿಳೆಯರು ಮಕ್ಕಳು ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗುತ್ತಿಲ್ಲ. ದುಡಿಯುವ ಅರ್ಧದಷ್ಟು ಹಣ ಎಣ್ಣೆ ಮಾರುವವರ ಕೈ ಸೇರುತ್ತಿದೆ. ಅಧಿಕಾರಿಗಳು ಎಚ್ಚೆತ್ತುಕೊಂಡು ಕಡಿವಾಣ ಹಾಕಿ ಗ್ರಾಮದಲ್ಲಿ ಶಾಂತಿ ನೆಮ್ಮದಿಯಿಂದ ಜೀವಿಸಲು ಅವಕಾಶ ಮಾಡಿ ಕೊಡಬೇಕೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಆಗ್ರಹಿಸಿದರು.

ಸಾಮಾಜಿಕ ಹೋರಾಟಗಾರ ಕೌರಿ ರೇಣುಕುಮಾರ್ ಅವರು ಮಾತನಾಡಿ, ಮದ್ಯ ಮಾರಾಟ ಯಾವುದೇ ಭಯವಿಲ್ಲದೆ ನಡೆಯುತ್ತಿದೆ ಯುವಕರು ಕುಡಿತಕ್ಕೆ ದಾಸರಾಗಿ ಕುಟುಂಬದ ನೆಮ್ಮದಿಯನ್ನು ಹಾಳು ಮಾಡುವುದಲ್ಲದೆ ಜೀವವನ್ನು ಕಳೆದುಕೊಳ್ಳುತ್ತಿದ್ದಾರೆ. ಅಬಕಾರಿ ಅಧಿಕಾರಿಗಳು ಮಾತ್ರ ಅಕ್ರಮ ಮದ್ಯ ಮಾರಾಟಗಾರರು ಯಾರೆಂದು ತಿಳಿದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.

### ಮಾರಾಟಗಾರರನ್ನು ಕೂಡಲೇ ಬಂಧಿಸಿ

ಈಗಾಗಲೇ ಕುಶಾವರ, ಚೌಡನ ಹಳ್ಳಿ, ಕೌರಿ ಗ್ರಾಮಗಳಲ್ಲಿ ಮದ್ಯಮಾರಾಟ ಮಿತಿ ಮೀರಿದ್ದು, ಚಿಲ್ಲರೆ ಅಂಗಡಿ ನಡೆಸುತ್ತಿರುವವರು ರಾಜಾರೋಷವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ. ಮಾರಾಟಗಾರರ ಮೇಲೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮನವಿ ಅಥವಾ ಮೌಖಿಕವಾಗಿ ಗ್ರಾಮಸ್ಥರು ದೂರು ನೀಡಿದರೆ ದೂರುದಾರರ ಹೆಸರನ್ನು ಬಹಿರಂಗಪಡಿಸಿ ಗ್ರಾಮದಲ್ಲಿ ಅಶಾಂತಿ ಉಂಟಾಗಲು ಕಾರಣವಾಗಿದೆ. ಕೂಡಲೇ ಅಂಥವರನ್ನು ಬಂಧಿಸಿ ಎಂದು ಸಭೆಯಲ್ಲಿ ಒತ್ತಾಯಿಸಲಾಯಿತು.

### ಪೊಲೀಸ್ ಇಲಾಖೆ ನಿರ್ಲಕ್ಷ್ಯ: ಆಕ್ರೋಶ

ರಾತ್ರಿ ವೇಳೆ ಬರುವ ಬೀಟ್ ಸಿಬ್ಬಂದಿಗಳು ಮದ್ಯ ಮಾರಾಟ ಕಂಡರೂ ಸಹ ಯಾವುದೇ ರೀತಿ ಗಮನ ಹರಿಸದೆ ಗೊತ್ತಿದ್ದರೂ ಗೊತ್ತಿಲ್ಲದ ಹಾಗೆ ಹಾಜರಾತಿ ಪುಸ್ತಕಕ್ಕೆ ಸಹಿ ಹಾಕಿ ಕಾಟಾಚಾರದ ಸೇವೆ ನೀಡುತ್ತಿದ್ದಾರೆ. ಮೊದಲು ಅಂತಹ ಸಿಬ್ಬಂದಿಗಳನ್ನು ವರ್ಗಾವಣೆ ಮಾಡುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು. ಸಾರ್ವಜನಿಕರಿಂದ ಮನವಿ ಸ್ವೀಕರಿಸಿ ಮಾತನಾಡಿದ ಅಬಕಾರಿ ಡಿವೈಎಸ್ಪಿ ರಘು ಅವರು, ಈ ಭಾಗದ ಹಳ್ಳಿಗಳಲ್ಲಿ ಕಾನೂನು ಬಾಹಿರವಾಗಿ ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟಲು ಇಲಾಖೆ ಸನ್ನದ್ಧವಾಗಿದೆ ಎಂದರು.

## ಭಾರತೀಯ ಸಂಸ್ಕೃತಿ, ಧರ್ಮ- ತತ್ವಜ್ಞಾನವನ್ನು ಹೊಸ ದಿಕ್ಕಿನಲ್ಲಿ ಮುನ್ನಡೆಸಿದ ಮಹಾನ್ ಯೋಗಿ

# ಧಾರ್ಮಿಕ ಕ್ಷೇತ್ರಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರ

• ಪ್ರಜೋದಯ ವರದಿ



**ಸಕಲೇಶಪುರ:** ಧಾರ್ಮಿಕ ಕ್ಷೇತ್ರಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರವಾಗಿದೆ ಎಂದು ತಾಲೂಕು ಬ್ರಾಹ್ಮಣ ಸಮಾಜದ ಮಾಜಿ ಅಧ್ಯಕ್ಷ ಸೂರ್ಯನಾರಾಯಣ್ ಹೇಳಿದರು.

ಪಟ್ಟಣದ ಗಾಯತ್ರಿ ಸಭಾಭವನದಲ್ಲಿ ಆಯೋಜಿಸಲಾಗಿದ್ದ ಶಂಕರಾಚಾರ್ಯ ಹಾಗೂ ರಾಮಾನುಜಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆದಿ ಶಂಕರಾಚಾರ್ಯರು ಭಾರತೀಯ ಸಂಸ್ಕೃತಿ, ಧರ್ಮ ಮತ್ತು ತತ್ವಜ್ಞಾನವನ್ನು ಹೊಸ ದಿಕ್ಕಿನಲ್ಲಿ ಮುನ್ನಡೆಸಿದ ಮಹಾನ್ ಯೋಗಿ ಹಾಗೂ ಚಿಂತಕರಾಗಿದ್ದರು. ಅಲ್ಪಾಯುಷ್ಯದಲ್ಲಿಯೇ ದೇಶದ ಮೂಲೆ ಮೂಲೆಗಳಲ್ಲಿ ಸಂಚರಿಸಿ ಸನಾತನ ಧರ್ಮದ ಸಾರವನ್ನು ಜನರಿಗೆ ತಲುಪಿಸಿದ ಅಪೂರ್ವ ಸಾಧನೆ ಅವರದ್ದು ಎಂದು ಹೇಳಿದರು.

ಧಾರ್ಮಿಕ ಮೌಲ್ಯಗಳ ಉಳಿವು, ವೇದಾಂತ ತತ್ವಗಳ ಪ್ರಸಾರ ಹಾಗೂ ಸಮಾಜದಲ್ಲಿ ಆತ್ಮಜ್ಞಾನ ಮೂಡಿಸುವ ಕಾರ್ಯದಲ್ಲಿ ಶಂಕರಾಚಾರ್ಯರ ಪಾತ್ರ ಅನನ್ಯವಾಗಿದೆ. ಅವರು ಬೋಧಿಸಿದ ಅದ್ವೈತ ತತ್ವವು ಮಾನವ ಜೀವನದ ಸಾರ್ಥಕತೆಯನ್ನು ತಿಳಿಸುವ ಮಹತ್ವದ ಸಂದೇಶವಾಗಿದೆ ಎಂದು ತಿಳಿಸಿದರು.

ಭಾರತದ ನಾಲ್ಕು ದಿಕ್ಕುಗಳಲ್ಲಿ ಮಠಗಳನ್ನು ಸ್ಥಾಪಿಸಿ ಧಾರ್ಮಿಕ ಏಕತೆ ಮತ್ತು ಸಾಂಸ್ಕೃತಿಕ ಬಾಂಧವ್ಯವನ್ನು ಬಲಪಡಿಸಿದ ಮಹಾನ್ ದೃಷ್ಟಿವಂತರಾಗಿದ್ದರು. ಇಂದಿನ ಯುವಜನತೆ ಶಂಕರಾಚಾರ್ಯರ ಆದರ್ಶಗಳನ್ನು ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಾಲೂಕು ಬ್ರಾಹ್ಮಣ ಸಮಾಜದ ಹಿರಿಯರಾದ ಕೇಶವ ಅಯ್ಯಂಗಾರ್ ಅವರು ಮಾತನಾಡಿ, ರಾಮಾನುಜಾಚಾರ್ಯರು ಭಕ್ತಿ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ಆಚಾರ್ಯರಾಗಿದ್ದರು. ಸಮಾಜದಲ್ಲಿ ಜಾತಿ ಭೇದಭಾವವನ್ನು ತೊಡೆದು ಹಾಕಿ ಎಲ್ಲರಿಗೂ ದೇವರ ಭಕ್ತಿ ಮಾರ್ಗವನ್ನು ತೆರೆದವರು ಅವರು ಎಂದು ಹೇಳಿದರು.

ವಿಶಿಷ್ಟಾದ್ವೈತ ತತ್ವದ ಮೂಲಕ ಭಕ್ತಿ ಮತ್ತು ಜ್ಞಾನ ಎರಡನ್ನೂ ಸಮನ್ವಯಗೊಳಿಸಿದ ರಾಮಾನುಜಾಚಾರ್ಯರು ಜನಸಾಮಾನ್ಯರಿಗೆ ಧರ್ಮದ ಸಾರವನ್ನು ಸರಳವಾಗಿ ತಿಳಿಸಿಕೊಟ್ಟರು. ದೇವರ ಸೇವೆಯ ಜೊತೆಗೆ ಮಾನವ ಸೇವೆಯೂ ಸಮಾನ ಮಹತ್ವದ್ದೆಂಬ ಸಂದೇಶವನ್ನು ಅವರು ನೀಡಿದರು.

ರಾಮಾನುಜಾಚಾರ್ಯರು ದೇವಾಲಯ ವ್ಯವಸ್ಥೆ, ಧಾರ್ಮಿಕ ಆಚರಣೆಗಳು ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ. ಅವರ ಆದರ್ಶಗಳು ಇಂದಿನ ಸಮಾಜಕ್ಕೂ ಪ್ರೇರಣೆಯಾಗಿದ್ದು, ಯುವಜನತೆ ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಭಜನೆ, ಪ್ರವಚನ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಯಿತು. ಬ್ರಾಹ್ಮಣರ ಬೀದಿಯಲ್ಲಿ ಒಂದು ಸುತ್ತು ಮರವಣಿಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಶಿವಪ್ರಕಾಶ್ ಧನಾವತ್, ಉಪಾಧ್ಯಕ್ಷ ರಘೋತ್ತಮ, ಪ್ರಧಾನ ಕಾರ್ಯದರ್ಶಿ ಶಿವಶಂಕರ್, ವಿಪ್ರ ಮಹಿಳಾ ಸಂಘದ ಅಧ್ಯಕ್ಷೆ ಸರೋಜಾ ಶ್ರೀನಿವಾಸ್, ಕಾರ್ಯದರ್ಶಿ ರಮಾ ಸತೀಶ್, ಸಮಾಜದ ಮುಖಂಡರುಗಳಾದ ಮಂಜುನಾಥ ಪ್ರಸಾದ್, ಅನಂತರಾಮ್, ರಘುರಾಮ್, ಶ್ರೀಕಾಂತ್, ವೆಂಕಟೇಶ್ ಹತ್ವಾರ್, ಸುರೇಶ್ ಸೇರಿದಂತೆ ಸಮಾಜದ ಮಹಿಳೆಯರು, ಇನ್ನಿತರ ಸದಸ್ಯರು ಭಾಗವಹಿಸಿದ್ದರು.

# ಕಾರ್ಮಿಕರು ದುಶ್ಚಟಗಳಿಂದ ದೂರವಿರಿ

## ಸ್ವಂತ ಉದ್ಯೋಗದ ಮೂಲಕ ಸ್ವಾಭಿಮಾನಿ ಬದುಕು ಕಟ್ಟಿಕೊಳ್ಳಿ

• ಪ್ರಜೋದಯ ವರದಿ



**ಆಲೂರು:** ಸಣ್ಣ ಕೈಗಾರಿಗೆ ಉದ್ಯಮ ಮಾಡುವವರು ಯಾವುದೆ ದುಷ್ಚಟಗಳಿಗೆ ಬಲಿಯಾಗದೆ, ಸ್ವಂತ ಉದ್ಯೋಗದ ಮೂಲಕ ಸ್ವಾಭಿಮಾನಿ ಬದುಕು ಕಟ್ಟಿಕೊಳ್ಳಬೇಕು ಎಂದು ಶಾಸಕ ಸಿಮೆಂಟ್ ಮಂಜು ಅವರು ತಿಳಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ, ಅರ್ಹ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ಮತ್ತು ಗಾರೆ ಕೆಲಸಕ್ಕೆ ಬೇಕಾಗಿರುವ ಪರಿಕರಗಳನ್ನು ವಿತರಣೆ ಮಾಡಿ ಮಾತನಾಡಿದ ಅವರು, ಗ್ರಾಮೀಣ ಭಾಗವಲ್ಲದೆ ನಗರದ ಬಹುತೇಕ ಅಂಗಡಿಗಳಲ್ಲಿ ಮದ್ಯ ಮಾರಾಟ ಎಗ್ಗಿಲ್ಲದೆ ನಡೆಯುತ್ತಿದೆ. ಈ ಕಾರಣದಿಂದ ಅನೇಕ ಉದ್ಯಮಿಗಳು ದಿನವೆಲ್ಲ ಕಷ್ಟಪಟ್ಟು ದುಡಿದ ಹಣವನ್ನು ಮದ್ಯದ ಅಂಗಡಿಗೆ ಹಾಕಿ, ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳುವುದಲ್ಲದೆ, ತಮ್ಮ ಕುಟುಂಬದ ಅಭಿವೃದ್ಧಿಗೆ ಕಂಟಕವಾಗಿದ್ದಾರೆ.

ಕಟ್ಟಡಗಳ ನಿರ್ಮಾಣಕ್ಕೆ ಸಂಬಂಧಿಸಿದ ಅನೇಕ ಕಾರ್ಮಿಕರು ತಮ್ಮ ದುಡಿಮೆಗೆ ಬೇಕಾಗಿರುವ ಪರಿಕರಗಳನ್ನು ಸರ್ಕಾರದಿಂದ ಉಚಿತವಾಗಿ ಕೊಡಲಾಗುತ್ತಿದೆ. ಕೆಲ ಕಾರ್ಮಿಕರ ದುಷ್ಚಟದಿಂದ ಅನೇಕ ಕುಟುಂಬಗಳ ಆರ್ಥಿಕ ಪರಿಸ್ಥಿತಿ ಶೋಚನೀಯವಾಗಿದೆ. ಉತ್ತಮ ನಡತೆಯಿಂದ ಜೀವನ ರೂಪಿಸಿಕೊಂಡು, ತಮ್ಮ ಮಕ್ಕಳಿಗೆ ತಪ್ಪದೆ ಶಿಕ್ಷಣ ಕೊಡಿಸಿ, ದೇಶದ ಉತ್ತಮ ಪ್ರಜೆಯನ್ನಾಗಿ ರೂಪಿಸ ಬೇಕು ಎಂದರು.

ಇಂದಿನ ದಿನಗಳಲ್ಲಿ ಮಕ್ಕಳು ಕೂಡ ಪೋಷಕರ ನಡೆ ನುಡಿಯನ್ನೇ ಗಮನಿಸುತ್ತಿರುತ್ತಾರೆ. ಅಂತೆಯೇ ಮಕ್ಕಳಿಗೆ ಸಾಧ್ಯವಾದಷ್ಟು ಮೊಬೈಲ್ ಕೊಡುವುದನ್ನು ನಿಲ್ಲಿಸಬೇಕು. ಅವರಿಗೆ ಹಿರಿಯ ದಾರ್ಶನಿಕ ವ್ಯಕ್ತಿಗಳ ಬಗ್ಗೆ ತಿಳಿಸಿಕೊಡುವಂತಹ ಕೆಲಸವಾಗಬೇಕು. ಉತ್ತಮ ನಡೆ ನುಡಿಗಳನ್ನು ಕಲಿಸಿಕೊಟ್ಟು ಸಂಸ್ಕಾರವಂತರನ್ನಾಗಿ ರೂಪಿಸಬೇಕು. ಆಗ ದೇಶದ ಉದ್ಧಾರ ಸಾಧ್ಯ ಎಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಬ್ರಹ್ಮಣ್ಯ ಶರ್ಮ ಇತರರು ಉಪಸ್ಥಿತರಿದ್ದರು.

